## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಖಾಸಗಿ ಕಾಲೇಜುಗಳಲ್ಲಿನ ಸ್ನಾತಕ ವೈದ್ಯಕೀಯ/ದಂತ ವೈದ್ಯಕೀಯ ಎನ್.ಆರ್.ಐ/ಆಡಳಿತ ಮಂಡಳಿ ಕೋಟಾದ ಸೀಟುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಂದ ಬ್ಯಾಂಕ್ ಗ್ಯಾರಂಟಿ ಪಡೆಯುವ ಬಗ್ಗೆ.

---***---

**ಓದಲಾಗಿದೆ:**

ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರ ದಿನಾಂಕ: 02-07-2018 ರ ಪತ್ರ ಸಂಖ್ಯೆ: ಡಿಎಂಇ/ಎಂಸಿಎಸ್/11/2018-19.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ 2018-19 ನೇ ಸಾಲಿಗೆ ರಾಜ್ಯದ ಖಾಸಗಿ ಕಾಲೇಜುಗಳಲ್ಲಿನ ಸ್ನಾತಕ ವೈದ್ಯಕೀಯ & ದಂತ ವೈದ್ಯಕೀಯ ಎನ್.ಆರ್.ಐ/ಆಡಳಿತ ಮಂಡಳಿ ಕೋಟಾದ ಶೇ. 20 ರಷ್ಟು ಸೀಟುಗಳಿಗೆ ಪ್ರವೇಶಾತಿ ಹೊಂದುವ ಅಭ್ಯರ್ಥಿಗಳಿಂದ ಮೊದಲನೇ ವರ್ಷದ ಶುಲ್ಕವನ್ನು ಪ್ರವೇಶಾತಿ ಸಂದರ್ಭದಲ್ಲಿ ಸಂಗ್ರಹಿಸುವಂತೆ ಹಾಗೂ ಇನ್ನುಳಿದ ಮೂರುವರೆ ವರ್ಷಗಳ ಶುಲ್ಕಕ್ಕೆ ಸಂಬಂಧಿಸಿದಂತೆ ಆಯಾ ಸಂಸ್ಥೆಗಳ ಹೆಸರಿನಲ್ಲಿಯೇ ಬ್ಯಾಂಕ್ ಗ್ಯಾರಂಟಿ ಪಡೆಯಲು ಕ್ರಮವಹಿಸುವಂತೆ ಹಾಗೂ ಈ ಬಗ್ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸೂಚಿಸಲು ಸರ್ಕಾರದಿಂದ ಆದೇಶವನ್ನು ನೀಡುವಂತೆ ವೈದ್ಯಕೀಯ ಶಿಕ್ಷಣ ನಿರ್ದೇಶಕರು ಕೋರಿರುತ್ತಾರೆ.

ಆದ್ದರಿಂದ ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, 2018-19 ನೇ ಸಾಲಿಗೆ ರಾಜ್ಯದ ಖಾಸಗಿ ಕಾಲೇಜುಗಳಲ್ಲಿನ ಸ್ನಾತಕ ವೈದ್ಯಕೀಯ & ದಂತ ವೈದ್ಯಕೀಯ ಎನ್.ಆರ್.ಐ/ಆಡಳಿತ ಮಂಡಳಿ ಕೋಟಾದ ಶೇ. 20 ರಷ್ಟು ಸೀಟುಗಳಿಗೆ ಪ್ರವೇಶಾತಿ ಹೊಂದುವ ಅಭ್ಯರ್ಥಿಗಳಿಂದ ಮೊದಲನೇ ವರ್ಷದ ಶುಲ್ಕವನ್ನು ಪ್ರವೇಶಾತಿ ಸಂದರ್ಭದಲ್ಲಿ ಸಂಗ್ರಹಿಸಲು ಹಾಗೂ ಇನ್ನುಳಿದ ಮೂರುವರೆ ವರ್ಷಗಳ ಶುಲ್ಕಕ್ಕೆ ಸಂಬಂಧಿಸಿದಂತೆ ಆಯಾ ಸಂಸ್ಥೆಗಳ ಹೆಸರಿನಲ್ಲಿಯೇ ಬ್ಯಾಂಕ್ ಗ್ಯಾರಂಟಿ ಪಡೆಯಲು ಸರ್ಕಾರವು ತೀರ್ಮಾನಿಸಿ, ಈ ಕೆಳಗಿನಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 206 ಆರ್‌ಜಿಯು 2018, ಬೆಂಗಳೂರು, ದಿ: 04-07-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018-19 ನೇ ಸಾಲಿಗೆ ರಾಜ್ಯದ ಖಾಸಗಿ ಕಾಲೇಜುಗಳಲ್ಲಿನ ಸ್ನಾತಕ ವೈದ್ಯಕೀಯ & ದಂತ ವೈದ್ಯಕೀಯ ಎನ್.ಆರ್.ಐ/ಆಡಳಿತ ಮಂಡಳಿ ಕೋಟಾದ ಶೇ. 20 ರಷ್ಟು ಸೀಟುಗಳಿಗೆ ಪ್ರವೇಶಾತಿ ಹೊಂದುವ ಅಭ್ಯರ್ಥಿಗಳಿಂದ ಮೊದಲನೇ ವರ್ಷದ ಶುಲ್ಕವನ್ನು ಪ್ರವೇಶಾತಿ ಸಂದರ್ಭದಲ್ಲಿ